ಕರ್ನಾಟಕ ಸರಕಾರ

# ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರು (ಆಡಳಿತ) ರವರ ಕಛೇರಿ, ಕಲಬುರಗಿ

ಸಂಖ್ಯೆ: ಸಿ1(1)/ಆಡಳಿತ/ಪ್ರಾಶಾಶಿ/ಜೇಷ್ಠತಾ ಪ.ಪ್ರ/03/2021-22 ದಿನಾಂಕ: 31.07.2021

## -: ಅಧಿಸೂಚನೆ :-

**ವಿಷಯ :-** ಕಲಬುರಗಿ ಜಿಲ್ಲೆಯ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ 6-8ನೇ ತರಗತಿಯ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ ದಿನಾಂಕ: 01-01-2021 ರಲ್ಲಿದ್ದಂತೆ ಮೇರಿಟ್ ಆಧಾರಿತ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಸಿದ್ಧಪಡಿಸಲು ಸೇವಾ ವಿವರಗಳನ್ನು ಪ್ರಕಟಿಸುವ ಕುರಿತು.

* * * * *

ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತಾ) ನಿಯಮಾವಳಿ 1957ರ ನಿಯಮ 10(1) ರನ್ವಯ ಪ್ರತಿ ವರ್ಷದ ಜನೇವರಿ-1ಕ್ಕೆ ಸರ್ಕಾರಿ ನೌಕರರ ಜೇಷ್ಠತಾ ಪಟ್ಟಿಯನ್ನು ಸಿದ್ಧಪಡಿಬೇಕಾಗುತ್ತದೆ. ಮುಂದುವರೆದು ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದ್ರಾಬಾದ-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮಿಸಲಾತಿ) (ಸ್ಥಳೀಯ ವೃಂದಗಳ ರಚನೆ, ಹಂಚಿಕೆ ಮತ್ತು ವ್ಯಕ್ತಿಗಳ ವರ್ಗಾವಣೆ) ನಿಯಮಗಳು, 2013ರ ನಿಯಮ 7(2)ರನ್ವಯ ಸ್ಥಳೀಯ ವೃಂದದ ಹಾಗೂ ಇದೇ ನಿಯಮಾವಳಿಯ ನಿಯಮ 7(3) ರನ್ವಯ ಉಳಿದ ಮೂಲ ವೃಂದದ ಪ್ರತ್ಯೇಕ ಜೇಷ್ಠತಾ ಪಟ್ಟಿಗಳನ್ನು ಪ್ರಕಟಿಸುವಂತೆ ತಿಳಿಸಲಾಗಿದೆ.

ಅದರಂತೆ ಕಲಬುರಗಿ ಜಿಲ್ಲೆಯ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ 6-8ನೇ ತರಗತಿಯ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ ದಿನಾಂಕ: 01-01-2021 ರಲ್ಲಿದ್ದಂತೆ ಜೇಷ್ಠತಾ ನಿಯಮಾವಳಿ 1957ರ ನಿಯಮ 5(1)(ಎ) ರಲ್ಲಿ ತಿಳಿಸಿದಂತೆ ಮೇರಿಟ್ ಆಧಾರಿತ ಜೇಷ್ಠತಾ ಪಟ್ಟಿಯನ್ನು ಸಿದ್ಧಪಡಿಸಲು, ಶಿಕ್ಷಕರ ಸೇವಾ ವಿವರಗಳನ್ನು 1 ರಿಂದ 25ನೇ ಅಂಕಣಗಳಲ್ಲಿ ನಮೂದಿಸಿ ತಾತ್ಕಾಲಿಕ ಪಟ್ಟಿಯನ್ನು ಈ ಕಛೇರಿಯ ವೆಬ್‌ಸೈಟ (ddpikalaburagi.in) ದಲ್ಲಿ ಪ್ರಕಟಿಸಲಾಗಿದೆ.

ಸಂಬಂಧಿಸಿದ ಶಿಕ್ಷಕರು ಸದರಿ ತಾತ್ಕಾಲಿಕ ಸೇವಾ ವಿವರಗಳ ಪಟ್ಟಿಯನ್ನು ಗಮನಿಸಿ ಪಟ್ಟಿಯ ಅಂಕಣ 1 ರಿಂದ 25 ರವರೆಗೆ ನಮೂದಿಸಿರುವ ವಿವರಗಳಿಗೆ ಏನಾದರು ತಿದ್ದುಪಡಿಗಳು ಇದ್ದಲ್ಲಿ ವೆಬ್‌ಸೈಟನಲ್ಲಿ ಪ್ರಕಟಿಸಿದ ನಿಗದಿತ ನಮೂನೆಯಲ್ಲಿ ಆಕ್ಷೇಪಣೆಗಳನ್ನು ಪೂರಕ ದಾಖಲೆಗಳೊಂದಿಗೆ ದಿನಾಂಕ: **13.08.2021** ರವರೆಗೆ ಈ ಕಛೇರಿಗೆ ಖುದ್ದಾಗಿ ಅಥವಾ ನೊಂದಾಯಿತ ಅಂಚೆ ಮೂಲಕ ಸಲ್ಲಿಸಬಹುದು.

**ಸದರಿ ಸೇವಾ ವಿವರಗಳ ತಾತ್ಕಾಲಿಕ ಪಟ್ಟಿಯನ್ನು ಈ ಕೆಳಗಿನ ವಿಧಾನವನ್ನು ಅನುಸರಿಸಿ ಸಿದ್ಧಪಡಿಸಲಾಗಿದೆ.**

1. 6-8ನೇ ತರಗತಿಯ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ ಮೊದಲನೇ ಆಯ್ಕೆ ಹಾಗೂ ನೇಮಕಾತಿ ಪ್ರಕ್ರೀಯೆಯನ್ನು 2014-15ನೇ ಸಾಲಿನ ನೇಮಕಾತಿ ಅಧಿಸೂಚನೆಯ ಮೂಲಕ ನಡೆಸಲಾಗಿದ್ದು, ತದನಂತರ 2017-18ನೇ ಸಾಲಿನಲ್ಲಿ ಹಾಗೂ 2018-19ನೇ ಸಾಲಿನಲ್ಲಿ ಆಯ್ಕೆ ಮತ್ತು ನೇಮಕಾತಿ ಪ್ರಕ್ರೀಯೆ ನಡೆದಿರುತ್ತವೆ. ಅದರಂತೆ ಆಯಾ ವರ್ಷಗಳ ಆಯ್ಕೆ ಮತ್ತು ನೇಮಕಾತಿ ಪ್ರಕ್ರೀಯೆಗಳಲ್ಲಿ ನೇಮಕಗೊಂಡ ಶಿಕ್ಷಕರ ಹೆಸರುಗಳನ್ನು ಅವರುಗಳು ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಗಳಿಸಿದ ಮೆರಿಟ್‌ನ್ನು ಆಧಾರಿಸಿ ಸೂಕ್ತ ಕ್ರಮಾಂಕದಲ್ಲಿ ಸೇವಾ ವಿವರಗಳ ಯಾದಿಯನ್ನು ಸಿದ್ಧಪಡಿಸಲಾಗಿದೆ.
2. ಸದರಿ ಆಯ್ಕೆ ಹಾಗೂ ನೇಮಕಾತಿ ಪ್ರಕ್ರೀಯೆಗಳಲ್ಲಿ ನೇಮಕಗೊಂಡು ನಿಧನ, ರಾಜಿನಾಮೆ ಹಾಗೂ ಬೇರೆ ಜಿಲ್ಲೆಗೆ ವರ್ಗಾವಣೆ ಹೊಂದಿದ ಶಿಕ್ಷಕರ ವಿವರಗಳನ್ನು ಸೇವಾ ವಿವರಗಳ ಪಟ್ಟಿಯಲ್ಲಿ ನಮೂದಿಸಲಾಗಿದೆ.

ಜೇಷ್ಠತಾ ಪಟ್ಟಿಯಲ್ಲಿ ಪರಿವೀಕ್ಷಣಾ ಅವಧಿ ತೃಪ್ತಿಕರವೆಂದು ಘೋಷಿಸಿದ ಶಿಕ್ಷಕರ ಹೆಸರುಗಳನ್ನು ಮಾತ್ರ ಸೇರಿಸಲಾಗುವುದು. ಅದರಂತೆ ಸಂಬಂಧಿಸಿದ ಶಿಕ್ಷಕರು ತಮ್ಮ ಪರಿವೀಕ್ಷಣಾ ಅವಧಿಯನ್ನು ತೃಪ್ತಿಕರವೆಂದು ಘೋಷಿಸಿದ ಆದೇಶದ ಪ್ರತಿಯನ್ನು ಕಡ್ಡಾಯವಾಗಿ ದಿನಾಂಕ:13.08.2021 ರವರೆಗೆ ಆಯಾ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಗೆ ಸಲ್ಲಿಸತಕ್ಕದ್ದು. ಸಂಬಂಧಿಸಿದ ಶಿಕ್ಷಕರ ಕ್ರೂಢೀಕೃತ ಯಾದಿಯನ್ನು ಸಿದ್ಧಪಡಿಸಿ ಕ್ಷೇತ್ರ ಶಿಕ್ಷಣಾಧಿಕಾರಿಗಳು ಶಿಕ್ಷಕರಿಂದ ಸಲ್ಲಿಸಲಾದ ಆದೇಶಗಳ ಪ್ರತಿಯೊಂದಿಗೆ ದಿನಾಂಕ:16.08.2021 ರಂದು ಈ ಕಛೇರಿಗೆ ವರದಿಯನ್ನು ಸಲ್ಲಿಸತಕ್ಕದ್ದು.

ನಿಗದಿಪಡಿಸಲಾದ ಕೊನೆಯ ದಿನಾಂಕ ಅಂದರೆ **13.08.2021** ರವರೆಗೆ ಸಲ್ಲಿಸಲಾದ ಆಕ್ಷೇಪಣೆಗಳನ್ನು ನಿಯಮನುಸಾರ ಪರಿಶೀಲಿಸಿ ಅವಶ್ಯಕತೆ ಇದ್ದಲ್ಲಿ ವಿವರಗಳನ್ನು ಸರಿಪಡಿಸಿದ ನಂತರ ಹಾಗೂ ಪರಿವೀಕ್ಷಣಾ ಅವಧಿ ತೃಪ್ತಿಕರವೆಂದು ಘೋಷಿಸಿದ ಶಿಕ್ಷಕರ ಹೆಸರುವುಳ್ಳ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಸಿದ್ಧಪಡಿಸಿ ಪ್ರಕಟಿಸಲಾಗುವುದು.

**ಉಪ ನಿರ್ದೇಶಕರು (ಆಡಳಿತ)**
**ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ**

ಪ್ರತಿಯನ್ನು :-

1. ಮಾನ್ಯ ಅಪರ ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ ರವರ ದಯಾಪರ ಮಾಹಿತಿಗಾಗಿ ಸಲ್ಲಿಸಿದೆ.
2. ಜಿಲ್ಲೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ಇವರಿಗೆ ಕಳುಹಿಸುತ್ತಾ ತಮ್ಮ ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಿ ಸಂಬಂಧಿಸಿದ ಶಿಕ್ಷಕರ ಗಮನಕ್ಕೆ ತರಲು ತಿಳಿಸಿದೆ.
3. ಈ ಕಛೇರಿಯ ಕಂಪ್ಯೂಟರ್ ಪ್ರೋಗ್ರಾಮರ್ ಇವರಿಗೆ ಕಳುಹಿಸಿ ಕಛೇರಿಯ ವೆಬ್‌ಸೈಟ್‌ದಲ್ಲಿ ಪ್ರಕಟಿಸಲು ತಿಳಿಸಿದೆ.

# ಆಕ್ಷೇಪಣೆ ನಮೂನೆ

(6–8ನೇ ತರಗತಿ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ ಸೇವಾ ವಿವರವುಳ್ಳ ಪ್ರಕಟಿಸಲಾದ ಪಟ್ಟಿಯಲ್ಲಿ ತಿದ್ದುಪಡಿಗೆ ಸಂಬಂಧಿಸಿದಂತೆ)

| | | |
|---|---|---|
| 1 | ಶಿಕ್ಷಕರ ಹೆಸರು ಹಾಗೂ ತಾತ್ಕಾಲಿಕ ಸೇವಾ ವಿವರವುಳ್ಳ ಪಟ್ಟಿಯ ನೇಮಕಾತಿ ವರ್ಷ ಹಾಗೂ ಕ್ರಮ ಸಂಖ್ಯೆ | **2014–15/2017–18/2018–19**<br>**ಸೇವಾ ವಿವರ ಪಟ್ಟಿಯ ಕ್ರ.ಸಂ.:________** |
| 2 | ಕಾರ್ಯನಿರ್ವಹಿಸುತ್ತಿರುವ ಶಾಲೆಯ ಹೆಸರು ಮತ್ತು ವಿಳಾಸ | |
| 3 | ಜನ್ಮ ದಿನಾಂಕ | |
| 4 | ಸೇವೆಗೆ ಸೇರಿದ ದಿನಾಂಕ | |
| 5 | ಪರಿವೀಕ್ಷಣಾ ಅವಧಿ ತೃಪ್ತಿಕರವೆಂದು ಘೋಷಿಸಿದ ದಿನಾಂಕ (ಆದೇಶದ ಪ್ರತಿ ಲಗತ್ತಿಸುವುದು) | |
| 6 | ಬೇರೆ ಜಿಲ್ಲೆಯಿಂದ ವರ್ಗಾವಣೆಯಾಗಿ ಈ ಜಿಲ್ಲೆಗೆ ಬಂದಿದಲ್ಲಿ ಆ ಜಿಲ್ಲೆಯ ಹೆಸರು, ಈ ಜಿಲ್ಲೆಗೆ ಬಂದ ದಿನಾಂಕ | |
| 7 | ಪ್ರವರ್ಗ (ಎಸ್.ಸಿ/ಎಸ್.ಟಿ/ಸಾಮಾನ್ಯ) | |
| 8 | ಆಯ್ಕೆ ಹಾಗೂ ನೇಮಕಾತಿ ಹೊಂದಿದ ವೃಂದ (ಸ್ಥಳೀಯ ವೃಂದ ಅಥವಾ ಉಳಿದ ಮೂಲ ವೃಂದ) | |
| 9 | ಶಿಕ್ಷಕರ ಮೊಬೈಲ್ ಸಂಖ್ಯೆ | |
| 10 | ಆಕ್ಷೇಪಣೆಯ ವಿವರಗಳು (ಪೂರಕ ದಾಖಲೆಗಳೊಂದಿಗೆ ಸಲ್ಲಿಸತಕ್ಕದ್ದು) | |

ಶಿಕ್ಷಕರ ಹೆಸರು & ರುಜು